# ಕಲ್ಯಾಣ ಇಲಾಖೆಯ ಚಟುವಟಿಕೆಗಳು

***ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಶಿಶುವಿಹಾರ, ಪ್ರಾಥಮಿಕ, ಪ್ರೌಢಶಾಲಾ ಹಾಗೂ ಕಾಲೇಜುಗಳ ಕಲ್ಯಾಣ ಕಾರ್ಯಕ್ರಮಗಳ ಮಾರ್ಗಸೂಚಿಗಳು:-***

## *A.* ಕಾರ್ಯಕ್ರಮದ ಉದ್ದೇಶ:-

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ 78 ಶಿಶುವಿಹಾರಗಳು, 12 ಪ್ರಾಥಮಿಕ ಶಾಲೆ, 33 ಪ್ರೌಢಶಾಲೆ ಮತ್ತು 13 ಪದವಿ ಪೂರ್ವ ಕಾಲೇಜುಗಳು ಅಸ್ತಿತ್ವದಲ್ಲಿರುತ್ತವೆ. ಇಲ್ಲಿ ವ್ಯಾಸಂಗ ಮಾಡಬಯಸುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ, ಅಲ್ಪಸಂಖ್ಯಾತರು ಮತ್ತು ಸಾಮಾನ್ಯ ವರ್ಗ, ಹಾಗೂ ಖಾಯಂ ಪೌರಕಾರ್ಮಿಕರ ಮಕ್ಕಳು, ಸಾಮಾಜಿಕವಾಗಿ, ಆರ್ಥಿಕವಾಗಿ ಕಡುಬಡವರಾಗಿದ್ದು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಇವರುಗಳ ಶೈಕ್ಷಣಿಕವಾಗಿ ಸಾಮಾಜಿಕವಾಗಿ ಅಭಿವೃದ್ಧಿಗೊಳಿಸಲು ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಉಚಿತವಾಗಿ ಸೌಲಭ್ಯಗಳನ್ನು ಒದಗಿಸಲಾಗುವುದು.

## *B.* ಕಾರ್ಯಕ್ರಮದ ವಿವರಣೆ:-

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಶಿಶುವಿಹಾರ, ಪ್ರಾಥಮಿಕ ಶಾಲೆ, ಪ್ರೌಢಶಾಲೆ & ಪದವಿ ಪೂರ್ವ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುವ ಎಲ್ಲಾ ವರ್ಗದ ಮಕ್ಕಳಿಗೆ ಉಚಿತ ಶಿಕ್ಷಣ ನೀಡಲಾಗುವುದು. ಈ ವಿದ್ಯಾರ್ಥಿಗಳಿಗೆ ಪ್ರವೇಶ ಶುಲ್ಕ, ಬೋಧನಾ ಶುಲ್ಕ ಮತ್ತು ಪರೀಕ್ಷಾ ಶುಲ್ಕವನ್ನು ಮರುಪಾವತಿಸಲಾಗುವುದು. ಅಲ್ಲದೇ ಉಚಿತ ಪಠ್ಯಪುಸ್ತಕ, ನೋಟ್‌ಪುಸ್ತಕ, ಸಮವಸ್ತ್ರ, ಸ್ಕೂಲ್‌ಬ್ಯಾಗ್, ಶೂ ಮತ್ತು ಕಾಲುಚೀಲಗಳು ಹಾಗೂ ಮಧ್ಯಾಹ್ನದ ಬಿಸಿ ಊಟದ ಸೌಲಭ್ಯವನ್ನು ಒದಗಿಸಲಾಗುವುದು. ಕ್ರೀಡಾಭ್ಯಾಸಕ್ಕಾಗಿ ಶಾಲೆಗಳಿಗೆ ಕ್ರೀಡಾ ಸಾಮಗ್ರಿಗಳನ್ನು ಹಾಗೂ ಆಟಿಕೆ ಸಾಮಗ್ರಿಗಳನ್ನು ಶಾಲಾ/ಕಾಲೇಜುಗಳಿಗೆ ಒದಗಿಸಲಾಗುವುದು. ಇದರಿಂದ ಆರ್ಥಿಕವಾಗಿ ಹಿಂದುಳಿದ ನಗರ ಪ್ರದೇಶದ ಬಡ ಕುಟುಂಬಗಳಿಗೆ ಸಾಕಷ್ಟು ಅನುಕೂಲವಾಗಿ ತಮ್ಮ ಮಕ್ಕಳನ್ನು ಶೈಕ್ಷಣಿಕವಾಗಿ ಮತ್ತು ಸಾಮಾಜಿಕವಾಗಿ ಹಾಗೂ ಉನ್ನತ ವ್ಯಾಸಂಗ ಪಡೆಯಲು ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

### *I)* ***ಶಿಶುವಿಹಾರ***

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಪೂರ್ವ-ಪಶ್ಚಿಮ-ದಕ್ಷಿಣ) ವಲಯಗಳಲ್ಲಿನ ಮಹಾನಗರ ಪಾಲಿಕೆ ಶಿಶುವಿಹಾರಗಳಲ್ಲಿ ವ್ಯಾಸಂಗ ಮಾಡುವ ಎಲ್ಲಾ ವರ್ಗದ ಮಕ್ಕಳಿಗೆ ಈ ಕೆಳಕಂಡ ಸೌಲಭ್ಯಗಳನ್ನು ಉಚಿತವಾಗಿ ಒದಗಿಸಲಾಗುವುದು.

1. ಸಮವಸ್ತ್ರಗಳನ್ನು ಒದಗಿಸಲಾಗುವುದು.
2. ಶೂ ಮತ್ತು ಕಾಲುಚೀಲವನ್ನು ಒದಗಿಸಲಾಗುವುದು.
3. ಮಧ್ಯಾಹ್ನದ ಬಿಸಿ ಊಟದ ವ್ಯವಸ್ಥೆಯನ್ನು ಒದಗಿಸಲಾಗುವುದು.
4. ಮಕ್ಕಳು ಆಟವಾಡಲು ಆಟಿಕೆ ಸಾಮಗ್ರಿಗಳನ್ನು ಶಾಲೆಗಳಿಗೆ ಒದಗಿಸಲಾಗುವುದು.
5. ಪಾಲಿಕೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪರಿಶಿಷ್ಟ ಜಾತಿ/ಪಂಗಡದವರಾಗಿದ್ದು, ಖಾಯಂ ಪೌರಕಾರ್ಮಿಕರು, ಖಾಯಂ ಮಾಲಿಗಳು ಹಾಗೂ ಖಾಯಂ ಗ್ಯಾಂಗ್‌ಮನ್‌ಗಳ ಮಕ್ಕಳು ಮಹಾನಗರ ಪಾಲಿಕೆ/ಸರ್ಕಾರಿ/ಅನುದಾನಿತ ಹಾಗೂ ಖಾಸಗಿ ಶಾಲೆಗಳಲ್ಲಿ ಓದುತ್ತಿದ್ದಲ್ಲಿ ಅಂತಹ ವಿದ್ಯಾರ್ಥಿಗಳಿಗೆ ವಾರ್ಷಿಕ ರೂ.750ಗಳಂತೆ ವಿದ್ಯಾರ್ಥಿವೇತನವನ್ನು ನೀಡಲಾಗುತ್ತಿದೆ.
6. 2009-10ನೇ ಸಾಲಿನಿಂದ ಮುಂದೆ ಪಾಲಿಕೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹಿಂದುಳಿದ ಮತ್ತು ಅಲ್ಪ ಸಂಖ್ಯಾತರ ಹಾಗೂ ಸಾಮಾನ್ಯ ವರ್ಗದ ಖಾಯಂ ಪೌರಕಾರ್ಮಿಕರು, ಖಾಯಂ ಮಾಲಿಗಳು ಹಾಗೂ ಖಾಯಂ ಗ್ಯಾಂಗ್‌ಮನ್‌ಗಳು ಹಾಗೂ ಖಾಯಂ 'ಡಿ' ಗ್ರೂಫ್ ನೌಕರರ ಮಕ್ಕಳು ಸರ್ಕಾರಿ, ಅನುದಾನಿತ, ಖಾಸಗಿ ಶಾಲೆಗಳಲ್ಲಿ ಓದುತ್ತಿದ್ದಲ್ಲಿ ಅಂತಹ ವಿದ್ಯಾರ್ಥಿಗಳಿಗೆ ವಾರ್ಷಿಕ ರೂ.750ಗಳಂತೆ ವಿದ್ಯಾರ್ಥಿವೇತನವನ್ನು ನೀಡಲಾಗುತ್ತದೆ.
7. ಸರ್ಕಾರದ ಅಧಿಕೃತ ಆದೇಶದಂತೆ ಪ್ರವೇಶ ಖೋಟಾ ಹಾಗೂ ಇತ್ಯಾದಿ ಶುಲ್ಕಗಳನ್ನು ಪ್ರದೇಶ ಬಯಸುವ ವಿದ್ಯಾರ್ಥಿಗಳಿಂದ ಪಡೆಯಬಹುದು.

## *II) ಪ್ರಾಥಮಿಕ ಶಾಲೆ*

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಪೂರ್ವ–ಪಶ್ಚಿಮ–ದಕ್ಷಿಣ) ವಲಯಗಳಲ್ಲಿನ ಮಹಾನಗರ ಪಾಲಿಕೆ ಪ್ರಾಥಮಿಕ ಶಾಲೆಗಳಲ್ಲಿ ವ್ಯಾಸಂಗ ಮಾಡುವ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ಈ ಕೆಳಕಂಡ ಸೌಲಭ್ಯಗಳನ್ನು ಉಚಿತವಾಗಿ ಒದಗಿಸಲಾಗುವುದು.

1. ಪಠ್ಯಪುಸ್ತಕಗಳನ್ನು ಒದಗಿಸಲಾಗುವುದು.
2. ನೋಟ್‌ಪುಸ್ತಕಗಳನ್ನು ಒದಗಿಸಲಾಗುವುದು
3. ಸಮವಸ್ತ್ರಗಳನ್ನು ಒದಗಿಸಲಾಗುವುದು.
4. ಶೂ ಮತ್ತು ಕಾಲುಚೀಲವನ್ನು ಒದಗಿಸಲಾಗುವುದು.
5. ಸ್ಕೂಲ್‌ಬ್ಯಾಗ್‌ಗಳನ್ನು ಒದಗಿಸಲಾಗುವುದು.
6. ಮಧ್ಯಾಹ್ನದ ಬಿಸಿ ಊಟದ ವ್ಯವಸ್ಥೆ ಮಾಡಲಾಗುವುದು.
7. ಕ್ರೀಡಾ ಸಾಮಗ್ರಿಗಳನ್ನು ಶಾಲೆಗಳಿಗೆ ಒದಗಿಸಲಾಗುವುದು.
8. 7ನೇ ತರಗತಿಯಲ್ಲಿ ವ್ಯಾಸಂಗ ಮಾಡುವ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ಐತಿಹಾಸಿಕ/ವೈಜ್ಞಾನಿಕ/ಕಲೆ ಇತ್ಯಾದಿ ಪ್ರಜ್ಞೆ ಮೂಡಿಸಲು ಪ್ರತಿ ವರ್ಷವೂ ಶೈಕ್ಷಣಿಕ ಪ್ರವಾಸ ಕೈಗೊಳ್ಳಲು ಪ್ರತಿ ವಿದ್ಯಾರ್ಥಿಗೆ ರೂ.300ಗಳನ್ನು ಪಾಲಿಕೆಯಿಂದ ವೆಚ್ಚ ಭರಿಸಲಾಗುವುದು.
9. ಶಾಲಾ ವಾರ್ಷಿಕೋತ್ಸವ ಸಮಾರಂಭವನ್ನು ನೆರವೇರಿಸಲು ಪ್ರತಿ ವರ್ಷ ಎಲ್ಲಾ ವರ್ಗದ ಪ್ರತಿ ವಿದ್ಯಾರ್ಥಿಗೆ 15ರಂತೆ ಪಾಲಿಕೆಯಿಂದ ಶಾಲಾ ವಾರ್ಷಿಕ ಸಮಾರಂಭಕ್ಕೆ ವೆಚ್ಚ ಭರಿಸಲಾಗುವುದು.
10. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಖಾಯಂ ಪೌರಕಾರ್ಮಿಕರು, ಗ್ಯಾಂಗ್‌ಮೆನ್ ಮಾಲೀಗಳಾಗಿ ಕಾರ್ಯನಿರ್ವಹಿಸುತ್ತಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ನೌಕರರ ಮಕ್ಕಳು ಮಹಾನಗಗರ ಪಾಲಿಕೆಯ ಶಾಲೆಯಲ್ಲಿ, ಸರ್ಕಾರಿ ಅನುದಾನಿತ ಖಾಸಗಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಮಹಾನಗರ ಪಾಲಿಕೆವತಿಯಿಂದ ವಾರ್ಷಿಕ ರೂ.750ಗಳಂತೆ ವಿದ್ಯಾರ್ಥಿವೇತನವನ್ನು ನೀಡಲಾಗುವುದು.
11. 2009–10ನೇ ಸಾಲಿನಿಂದ ಪಾಲಿಕೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹಿಂದುಳಿದ ಮತ್ತು ಅಲ್ಪ ಸಖ್ಯಾತರ ಹಾಗೂ ಸಾಮಾನ್ಯ ವರ್ಗದ ಖಾಯಂ ಪೌರಕಾರ್ಮಿಕರು, ಖಾಯಂ ಮಾಲಿಗಳು ಹಾಗೂ ಖಾಯಂ ಗ್ಯಾಂಗ್‌ಮನ್‌ಗಳು ಹಾಗೂ ಖಾಯಂ 'ಡಿ' ಗ್ರೂಫ್ ನೌಕರರ ಮಕ್ಕಳು ಸರ್ಕಾರಿ, ಅನುದಾನಿತ, ಖಾಸಗಿ ಶಾಲೆಗಳಲ್ಲಿ ಓದುತ್ತಿದ್ದಲ್ಲಿ ಅಂತಹ ವಿದ್ಯಾರ್ಥಿಗಳಿಗೆ ವಾರ್ಷಿಕ ರೂ.750ಗಳಂತೆ ವಿದ್ಯಾರ್ಥಿವೇತನವನ್ನು ಪಾಲಿಕೆ ವತಿಯಿಂದ ನೀಡಲಾಗುವುದು.
12. ಸರ್ಕಾರದ ಆದೇಶದಂತೆ ಪ್ರವೇಶ ಬಯಸುವ ಎಲ್ಲಾ ವಿದ್ಯಾರ್ಥಿಗಳಿಂದ ಪ್ರವೇಶ ಶುಲ್ಕ, ಬೋಧನಾ ಶುಲ್ಕ ಹಾಗೂ ಇತರೆ ಶುಲ್ಕಗಳನ್ನು ಪಡೆಯಲಾಗುವುದು.

## *III) ಪ್ರೌಢಶಾಲೆ*

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಪೂರ್ವ–ಪಶ್ಚಿಮ–ದಕ್ಷಿಣ) ವಲಯಗಳಲ್ಲಿನ ಮಹಾನಗರ ಪಾಲಿಕೆ ಪ್ರೌಢಶಾಲೆಗಳಲ್ಲಿ ವ್ಯಾಸಂಗ ಮಾಡುವ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ಈ ಕೆಳಕಂಡ ಸೌಲಭ್ಯಗಳನ್ನು ಉಚಿತವಾಗಿ ಒದಗಿಸಲಾಗುವುದು.

1. ಪಠ್ಯಪುಸ್ತಕಗಳನ್ನು ಒದಗಿಸಲಾಗುವುದು.
2. ನೋಟ್‌ಪುಸ್ತಕಗಳನ್ನು ಒದಗಿಸಲಾಗುವುದು.
3. ಶಾಲಾ ಸಮವಸ್ತ್ರಗಳನ್ನು ಒದಗಿಸಲಾಗುವುದು.
4. ಶೂ ಮತ್ತು ಕಾಲುಚೀಲವನ್ನು ಒದಗಿಸಲಾಗುವುದು.
5. ಸ್ಕೂಲ್‌ಬ್ಯಾಗ್‌ಗಳನ್ನು ಒದಗಿಸಲಾಗುವುದು.
6. ಕ್ರೀಡಾ ಸಾಮಗ್ರಿಗಳನ್ನು ಶಾಲೆಗಳಿಗೆ ಒದಗಿಸಲಾಗುವುದು.
7. ಮಧ್ಯಾಹ್ನದ ಬಿಸಿ ಊಟದ ವ್ಯವಸ್ಥೆ ಮಾಡಲಾಗುವುದು.
8. 10ನೇ ತರಗತಿಯಲ್ಲಿ ವ್ಯಾಸಂಗ ಮಾಡುವ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ಐತಿಹಾಸಿಕ/ವೈಜ್ಞಾನಿಕ/ಕಲೆ/ಸಾಹಿತ್ಯ/ಇತ್ಯಾದಿ ಪ್ರಜ್ಞೆ ಮೂಡಿಸಲು ಪ್ರತಿ ವರ್ಷವೂ ಶೈಕ್ಷಣಿಕ ಪ್ರವಾಸ ಕೈಗೊಳ್ಳಲು ಪ್ರತಿ ವಿದ್ಯಾರ್ಥಿಗೆ ರೂ.300ಗಳನ್ನು ಪಾಲಿಕೆಯಿಂದ ವೆಚ್ಚ ಭರಿಸಲಾಗುವುದು.
9. ಶಾಲಾ ವಾರ್ಷಿಕೋತ್ಸವ ಸಮಾರಂಭವನ್ನು ನೆರವೇರಿಸಲು ಪ್ರತಿ ವರ್ಷ ಎಲ್ಲಾ ವರ್ಗದ 8, 9 ಮತ್ತು 10 ತರಗತಿಯಲ್ಲಿ ವ್ಯಾಸಂಗ ಮಾಡುವ ಪ್ರತಿ ವಿದ್ಯಾರ್ಥಿಗೆ ವಾರ್ಷಿಕೋತ್ಸವ ಸಮಾರಂಭಕ್ಕೆ 20ರಂತೆ ಪಾಲಿಕೆಯಿಂದ ವೆಚ್ಚ ಭರಿಸಲಾಗುವುದು.

10. ಮಹಾನಗರ ಪಾಲಿಕೆಯ ಪ್ರೌಢಶಾಲೆಗಳಲ್ಲಿ ವ್ಯಾಸಂಗ ಮಾಡಿ 10ನೇ ತರಗತಿ ಪರೀಕ್ಷೆಯಲ್ಲಿ ಶೇ.60ಕ್ಕಿಂತ ಹೆಚ್ಚಿನ ಅಂಕವನ್ನು ಪಡೆದ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ವಾರ್ಷಿಕ ರೂ.500ರ ಪ್ರೋತ್ಸಾಹ ಧನವನ್ನು ಹಾಗೂ ಶೇ.85ಕ್ಕಿಂತ ಹೆಚ್ಚಿನ ಅಂಕವನ್ನು ಪಡೆದ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ವಾರ್ಷಿಕ ರೂ.10,000ರ ಪ್ರೋತ್ಸಾಹ ಧನವನ್ನು ನೀಡಲಾಗುವುದು.

11. ಮಹಾನಗರ ಪಾಲಿಕೆಯ ಪ್ರೌಢಶಾಲೆಗಳಲ್ಲಿ ವ್ಯಾಸಂಗ ಮಾಡುವ ಎಲ್ಲಾ ವರ್ಗದ 10ನೇ ತರಗತಿ ವಿದ್ಯಾರ್ಥಿನಿಯರಿಗೆ ಮಾತ್ರ ಪರೀಕ್ಷಾ ಶುಲ್ಕವನ್ನು ಪಾಲಿಕೆಯ ವತಿಯಿಂದ ಭರಿಸಲಾಗುವುದು.

12. ಪಾಲಿಕೆಯ ಪ್ರೌಢಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿದ್ದು ಕ್ರೀಡೆಗಳಲ್ಲಿ ವಲಯಮಟ್ಟ, ಜಿಲ್ಲಾ ಮಟ್ಟ, ರಾಜ್ಯಮಟ್ಟ ಹಾಗೂ ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗುವ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ಕ್ರೀಡೆಗಳಿಗನುಗುಣವಾಗಿ ಕ್ರೀಡಾ ಸಮವಸ್ತ್ರಗಳನ್ನು ಮತ್ತು ಹೋಗಿಬರುವ ಪ್ರಯಾಣ ಭತ್ಯೆ ಮತ್ತು ದಿನ ಭತ್ಯೆಯನ್ನು ನೀಡಲಾಗುವುದು. ಅಲ್ಲದೆ ಕ್ರಮವಾಗಿ ರೂ.500, ರೂ.2000, ರೂ.5000ಗಳ ಪ್ರೋತ್ಸಾಹ ಧನವನ್ನು ಸಹ ನೀಡಲಾಗುವುದು.

13. ಪಾಲಿಕೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪರಿಶಿಷ್ಟ ಜಾತಿ/ಪಂಗಡದವರಾಗಿದ್ದು, ಖಾಯಂ ಪೌರಕಾರ್ಮಿಕರು, ಖಾಯಂ ಮಾಲಿಗಳು ಹಾಗೂ ಖಾಯಂ ಗ್ಯಾಂಗ್‌ಮನ್‌ಗಳ ಮಕ್ಕಳು ಮಹಾನಗರ ಪಾಲಿಕೆ ಶಾಲೆಗಳಲ್ಲಿ, ಸರ್ಕಾರಿ, ಅನುದಾನಿತ, ಖಾಸಗಿ ಶಾಲೆಗಳಲ್ಲಿ ಓದುತ್ತಿದ್ದಲ್ಲಿ ಅಂತಹ ವಿದ್ಯಾರ್ಥಿಗಳಿಗೆ ಮಹಾನಗರ ಪಾಲಿಕೆವತಿಯಿಂದ ವಾರ್ಷಿಕ ರೂ.1000ಗಳಂತೆ ವಿದ್ಯಾರ್ಥಿವೇತನವನ್ನು ನೀಡಲಾಗುವುದು.

14. 2009–10ನೇ ಸಾಲಿನಿಂದ ಪಾಲಿಕೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ವರ್ಗದ ಖಾಯಂ ಪೌರಕಾರ್ಮಿಕರು, ಖಾಯಂ ಮಾಲಿಗಳು ಹಾಗೂ ಖಾಯಂ ಗ್ಯಾಂಗ್‌ಮನ್‌ಗಳು ಹಾಗೂ ಖಾಯಂ 'ಡಿ' ಗ್ರೂಫ್ ನೌಕರರ ಮಕ್ಕಳು ಸರ್ಕಾರಿ, ಅನುದಾನಿತ, ಖಾಸಗಿ ಶಾಲೆಗಳಲ್ಲಿ ಓದುತ್ತಿದ್ದಲ್ಲಿ ಅಂತಹ ವಿದ್ಯಾರ್ಥಿಗಳಿಗೆ ವಾರ್ಷಿಕ ರೂ.1000ಗಳಂತೆ ವಿದ್ಯಾರ್ಥಿವೇತನವನ್ನು ನೀಡಲಾಗುವುದು.

15. ಸರ್ಕಾರದ ಆದೇಶದಂತೆ ಪ್ರವೃಶ ಬಯಸುವ ವಿದ್ಯಾರ್ಥಿಗಳಿಂದ ಪ್ರವೇಶ ಶುಲ್ಕ, ಬೋಧನಾ ಶುಲ್ಕ ಹಾಗೂ ಇತರೆ ಶುಲ್ಕಗಳನ್ನು ಪಡೆಯಲಾಗುವುದು.

### *IV) ಪದವಿ ಪೂರ್ವ ಕಾಲೇಜು*

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಪೂರ್ವ–ಪಶ್ಚಿಮ–ದಕ್ಷಿಣ) ವಲಯಗಳಲ್ಲಿನ ಮಹಾನಗರ ಪಾಲಿಕೆಯ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ಈ ಕೆಳಕಂಡ ಸೌಲಭ್ಯಗಳನ್ನು ಉಚಿತವಾಗಿ ಒದಗಿಸಲಾಗುವುದು.

1. ಪಠ್ಯಪುಸ್ತಕಗಳನ್ನು ಒದಗಿಸಲಾಗುವುದು.

2. ಲಾಂಗ್ ನೋಟ್‌ಪುಸ್ತಕಗಳನ್ನು ಒದಗಿಸಲಾಗುವುದು.

3. ಮಧ್ಯಾಹ್ನದ ಬಿಸಿ ಊಟದ ವ್ಯವಸ್ಥೆ ಮಾಡಲಾಗುವುದು.

4. ಕ್ರೀಡಾ ಸಾಮಗ್ರಿಗಳನ್ನು ಕಾಲೇಜುಗಳಿಗೆ ಒದಗಿಸಲಾಗುವುದು.

5. ದ್ವಿತೀಯ ಪಿ.ಯು.ಸಿ.ಯಲ್ಲಿ ವ್ಯಾಸಂಗ ಮಾಡುವ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ಐತಿಹಾಸಿಕ/ವೈಜ್ಞಾನಿಕ/ಕಲೆ/ಸಾಹಿತ್ಯ/ಇತ್ಯಾದಿ ಪ್ರಜ್ಞೆ ಮೂಡಿಸಲು ಪ್ರತಿ ವರ್ಷವೂ ಶೈಕ್ಷಣಿಕ ಪ್ರವಾಸ ಕೈಗೊಳ್ಳಲು ಪ್ರತಿ ವಿದ್ಯಾರ್ಥಿಗೆ ರೂ. 300ಗಳನ್ನು ಪಾಲಿಕೆಯಿಂದ ವೆಚ್ಚ ಭರಿಸಲಾಗುವುದು.

6. ಕಾಲೇಜು ವಾರ್ಷಿಕೋತ್ಸವ ಸಮಾರಂಭವನ್ನು ನೆರವೇರಿಸಲು ಪ್ರತಿ ವರ್ಷ ಎಲ್ಲಾ ವರ್ಗದ (ಪ್ರಥಮ ಮತ್ತು ದ್ವಿತೀಯ ಪಿ.ಯು.ಸಿ.) ವಿದ್ಯಾರ್ಥಿಗೆ ಪ್ರತಿ 20ರಂತೆ ಪಾಲಿಕೆಯಿಂದ ಕಾಲೇಜು ಸಮಾರಂಭಕ್ಕೆ ವೆಚ್ಚ ಭರಿಸಲಾಗುವುದು.

7. ಮಹಾನಗರ ಪಾಲಿಕೆಯ ಕಾಲೇಜುಗಳಲ್ಲಿ ವ್ಯಾಸಂಗ ಮಾಡಿ ದ್ವಿತೀಯ ಪಿ.ಯು.ಸಿ. ಪರೀಕ್ಷೆಯಲ್ಲಿ ಶೇ 60ಕ್ಕಿಂತ ಹೆಚ್ಚಿನ ಅಂಕವನ್ನು ಪಡೆದ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ರೂ.750ರ ಪ್ರೋತ್ಸಾಹ ಧನ ಹಾಗೂ ಶೇ 85ಕ್ಕಿಂತ ಹೆಚ್ಚಿನ ಅಂಕವನ್ನು ಪಡೆದ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ರೂ.15,000ರ ಪ್ರೋತ್ಸಾಹ ಧನವನ್ನು ನೀಡಲಾಗುವುದು.

8. ಮಹಾನಗರ ಪಾಲಿಕೆಯ ಕಾಲೇಜುಗಳಲ್ಲಿ ವ್ಯಾಸಂಗ ಮಾಡುವ ಎಲ್ಲಾ ವರ್ಗದ ದ್ವಿತೀಯ ಪಿ.ಯು.ಸಿ. ವಿದ್ಯಾರ್ಥಿನಿಯರಿಗೆ ಪರೀಕ್ಷಾ ಶುಲ್ಕವನ್ನು ಪಾಲಿಕೆಯ ವತಿಯಿಂದ ಭರಿಸಲಾಗುವುದು.

9. ಪಾಲಿಕೆಯ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿದ್ದು ಕ್ರೀಡೆಗಳಲ್ಲಿ ವಲಯಮಟ್ಟ, ಜಿಲ್ಲಾ ಮಟ್ಟ, ರಾಜ್ಯಮಟ್ಟ ಹಾಗೂ ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗುವ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ಕ್ರೀಡೆಗಳಿಗನುಗುಣವಾಗಿ ಕ್ರೀಡಾಸಮವಸ್ತ್ರ, ಹೋಗಿಬರುವ ಪ್ರಯಾಣ ಭತ್ಯೆ ಹಾಗೂ ದಿನಭತ್ಯೆಯನ್ನು ನೀಡಲಾಗುವುದು. ಅಲ್ಲದೆ ಕ್ರಮವಾಗಿ ರೂ.500, ರೂ.2000, ರೂ.5000ಗಳ ಪ್ರೋತ್ಸಾಹ ಧನವನ್ನು ಸಹ ನೀಡಲಾಗುವುದು.

10. ಪಾಲಿಕೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪರಿಶಿಷ್ಟ ಜಾತಿ/ಪಂಗಡದವರಾಗಿದ್ದು, ಖಾಯಂ ಪೌರಕಾರ್ಮಿಕರು, ಖಾಯಂ ಮಾಲಿಗಳು ಹಾಗೂ ಖಾಯಂ ಗ್ಯಾಂಗ್‌ಮನ್‌ಗಳ ಮಕ್ಕಳು ಮಹಾನಗರ ಪಾಲಿಕೆ ಕಾಲೇಜುಗಳಲ್ಲಿ, ಸರ್ಕಾರಿ, ಅನುದಾನಿತ ಖಾಸಗಿ ಶಾಲೆಗಳಲ್ಲಿ ಓದುತ್ತಿದ್ದಲ್ಲಿ ಅಂತಹ ವಿದ್ಯಾರ್ಥಿಗಳಿಗೆ ಮಹಾನಗರ ಪಾಲಿಕೆವತಿಯಿಂದ ವಾರ್ಷಿಕ ರೂ.1250ಗಳಂತೆ ವಿದ್ಯಾರ್ಥಿವೇತನವನ್ನು ನೀಡಲಾಗುತ್ತಿದೆ.

11. 2009–10ನೇ ಸಾಲಿನಲ್ಲಿ ಪಾಲಿಕೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ವರ್ಗದ ಖಾಯಂ ಪೌರಕಾರ್ಮಿಕರು, ಖಾಯಂ ಮಾಲಿಗಳು ಹಾಗೂ ಖಾಯಂ ಗ್ಯಾಂಗ್‌ಮನ್‌ಗಳು ಹಾಗೂ ಖಾಯಂ 'ಡಿ' ಗ್ರೂಫ್ ನೌಕರರ ಮಕ್ಕಳು ಸರ್ಕಾರಿ, ಅನುದಾನಿತ, ಖಾಸಗಿ ಶಾಲೆಗಳಲ್ಲಿ ಓದುತ್ತಿದ್ದಲ್ಲಿ ಅಂತಹ ವಿದ್ಯಾರ್ಥಿಗಳಿಗೆ ವಾರ್ಷಿಕ ರೂ.1250ಗಳಂತೆ ವಿದ್ಯಾರ್ಥಿವೇತನವನ್ನು ನೀಡಲಾಗುವುದು.

12. ಸರ್ಕಾರದ ಆದೇಶದಂತೆ ಪ್ರದೇಶ ಬಯಸುವ ಎಲ್ಲಾ ವಿದ್ಯಾರ್ಥಿಗಳಿಂದ ಪ್ರವೇಶ ಶುಲ್ಕ, ಬೋಧನಾ ಶುಲ್ಕ ಹಾಗೂ ಇತರೆ ಶುಲ್ಕಗಳನ್ನು ಪಡೆಯಲಾಗುವುದು.

## *C.* ಪ್ರವೇಶ ಬಯಸುವ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಇರಬೇಕಾದ ಅರ್ಹತೆಗಳು:–

- ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯಾಯ ವಲಯ ವ್ಯಾಪ್ತಿಯಲ್ಲಿ ವಾಸಿಸುತ್ತಿರಬೇಕು. (ಮತದಾರರ ಗುರುತಿನ ಚೀಟಿ/ಮತದಾರರ ಪಟ್ಟಿ/ಪಡಿತರ ಚೀಟಿ/ಆಯಾ ವಾರ್ಡ್‌ಗಳಿಗೆ ಸಂಬಂಧಿಸಿದ ಕಂದಾಯ ಅಧಿಕಾರಿಗಳಿಂದ ವಾಸ ದೃಢೀಕರಣ ಪತ್ರ ಸಲ್ಲಿಸಬೇಕು)

- ವಿದ್ಯಾರ್ಥಿಗಳು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಗೆ ಸಂಬಂಧಪಟ್ಟ ತಹಸೀಲ್ದಾರ್‌ರವರಿಂದ ಪಡೆದಿರುವ ಜಾತಿ ಹಾಗೂ ಆದಾಯ ಪ್ರಮಾಣ ಪತ್ರವನ್ನು ಲಗತ್ತಿಸಬೇಕು.

- ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಎಲ್ಲಾ ವಲಯಗಳ ಶಾಲಾ/ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ವರ್ಗದ ವಿದ್ಯಾರ್ಥಿಗಳು ಮಾತ್ರ ಈ ಸೌಲಭ್ಯಗಳಿಗೆ ಅರ್ಹರಾಗಿರುತ್ತಾರೆ.

- ವಿದ್ಯಾರ್ಥಿ ವೇತನ ಪಡೆಯಲು ಮಹಾನಗರ ಪಾಲಿಕೆಯಲ್ಲಿ ಖಾಯಂ ಪೌರಕಾರ್ಮಿಕರು, ಗ್ಯಾಂಗ್‌ಮೆನ್‌ಗಳು, ಮಾಲೀಗಳು ಮತ್ತು 'ಡಿ' ಗ್ರೂಪ್ ನೌಕರರಾಗಿ ಕಾರ್ಯನಿರ್ವಹಿಸುತ್ತಿರುವವರ ಮಕ್ಕಳು ಮಹಾನಗರ ಪಾಲಿಕೆ ಶಾಲೆಗಳಲ್ಲಿ, ಸರ್ಕಾರಿ ಅನುದಾನಿತ ಖಾಸಗಿ ಶಾಲೆಗಳಲ್ಲಿ ಓದುತ್ತಿದ್ದು, ಅಂತಹ ವಿದ್ಯಾರ್ಥಿಗಳು ಮಾತ್ರ ವಿದ್ಯಾರ್ಥಿ ವೇತನ ಪಡೆಯಲು ಅರ್ಹರಾಗಿರುತ್ತಾರೆ.

- ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಶಿಶುವಿಹಾರ ಶಾಲೆಗಳಲ್ಲಿ ವ್ಯಾಸಂಗ ಮಾಡ ಬಯಸುವ ವಿದ್ಯಾರ್ಥಿಗಳಿಗೆ ವಯಸ್ಸು ಕನಿಷ್ಠ 3 ವರ್ಷಗಳು ತುಂಬಿರಬೇಕು.

- ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಪ್ರಾಥಮಿಕ ಶಾಲೆಗಳಲ್ಲಿ ವ್ಯಾಸಂಗ ಮಾಡ ಬಯಸುವ ವಿದ್ಯಾರ್ಥಿಗಳಿಗೆ ವಯಸ್ಸು ಕನಿಷ್ಠ 5 ವರ್ಷ 10 ತಿಂಗಳು ತುಂಬಿರಬೇಕು.

- ವಿದ್ಯಾರ್ಥಿಗಳು 5 ಭಾವಚಿತ್ರವನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು.

- ವಿದ್ಯಾರ್ಥಿಗಳು ಅರ್ಜಿಯೊಂದಿಗೆ ಮಹಾನಗರ ಪಾಲಿಕೆ ಶಾಲಾ/ಕಾಲೇಜುಗಳಲ್ಲಿ ವ್ಯಾಸಂಗ ಮಾಡಬಯಸುವವರು ಹಿಂದಿನ ತರಗತಿಯಲ್ಲಿ ವ್ಯಾಸಂಗ ಮಾಡಿದ ಶಾಲೆಗಳಿಂದ ಪಡೆದ ವರ್ಗಾವಣೆ ಮೂಲ ಪ್ರಮಾಣ ಪತ್ರ ಮತ್ತು ಅಂಕಪಟ್ಟಿಯ ಜೆರಾಕ್ಸ್ ಪ್ರತಿಯನ್ನು ಲಗತ್ತಿಸಬೇಕು.

- ಶಿಶುವಿಹಾರಕ್ಕೆ ದಾಖಲಾಗಲು ಮಹಾನಗರ ಪಾಲಿಕೆ ವತಿಯಿಂದ ಪಡೆದ ಮೂಲ ಜನನ ಪ್ರಮಾಣ ಪತ್ರವನ್ನು ಲಗತ್ತಿಸಬೇಕು.

- ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಶಾಲಾ/ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ವರ್ಗದ ವಿದ್ಯಾರ್ಥಿಗಳು ವಿದ್ಯಾರ್ಥಿವೇತನ ಪಡೆಯ ಬಯಸುವವರು ಸಂಬಂಧಪಟ್ಟ ಶಾಲಾ ಮುಖ್ಯಸ್ಥರು ಹಾಗೂ ಸರ್ಕಾರ ಸಮಾಜ ಕಲ್ಯಾಣ ಇಲಾಖೆಯಿಂದ ವಿದ್ಯಾರ್ಥಿ ವೇತನ ಪಡೆದಿಲ್ಲವೆಂದು ದೃಢೀಕರಿಸಿ ಮಹಾನಗರ ಪಾಲಿಕೆಗೆ ಸದರಿ ಪತ್ರವನ್ನು ಸಲ್ಲಿಸಿದ್ದಲ್ಲಿ ಅಂತಹ ವಿದ್ಯಾರ್ಥಿಗಳಿಗೆ ಮಹಾನಗರ ಪಾಲಿಕೆ ವತಿಯಿಂದ ವಿದ್ಯಾರ್ಥಿ ವೇತನ ನೀಡಲಾಗುವುದು.

- ಪಾಲಿಕೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ವರ್ಗದ ಪೌರಕಾರ್ಮಿಕರು, ಮಾಲಿಗಳು ಹಾಗೂ ಗ್ಯಾಂಗ್‌ಮನ್‌ಗಳು ಹಾಗೂ 'ಡಿ' ಗ್ರೂಫ್ ನೌಕರರುಗಳು ಕಾರ್ಯ ನಿರ್ವಹಿಸುತ್ತಿರುವ ಕಛೇರಿಯಿಂದ ಖಾಯಂ ನೌಕರರೆಂಬುದಕ್ಕೆ ಕಛೇರಿ ಮುಖ್ಯಸ್ಥರಿಂದ ದೃಢೀಕರಣ ಪ್ರಮಾಣ ಪತ್ರವನ್ನು ಪಡೆದು ಮಹಾನಗರ ಪಾಲಿಕೆಗೆ ಸಲ್ಲಿಸಬೇಕು.

## *D.* ಆಯ್ಕೆಯ ವಿಧಾನ:–

❖ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಶಾಲಾ/ಕಾಲೇಜುಗಳಲ್ಲಿನ ಮುಖ್ಯಸ್ಥರು ವಿದ್ಯಾರ್ಥಿಗಳ ದಾಖಲಾತಿ ಸಮಯದಲ್ಲಿ ಕರಪತ್ರಗಳನ್ನು ಮುದ್ರಿಸಿ ಹಂಚುವ ಮೂಲಕ ಪ್ರಚಾರ ಪಡಿಸುವುದು.

❖ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಶಾಲಾ/ಕಾಲೇಜುಗಳಲ್ಲಿ ವ್ಯಾಸಂಗ ಮಾಡ ಬಯಸುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ, ಅಲ್ಪಾಸಂಖ್ಯಾತರು ಹಾಗೂ ಸಾಮಾನ್ಯ ವರ್ಗದ ವಿದ್ಯಾರ್ಥಿಗಳು ಆಯಾ ಶಾಲೆಗಳಿಂದ ಪಡೆದ ಭರ್ತಿ ಮಾಡಿದ ಅರ್ಜಿಗಳನ್ನು ನಿಗಧಿತ ದಿನಾಂಕ ಮತ್ತು ಅವಧಿಯೊಳಗೆ ಸಲ್ಲಿಸಬೇಕು.

❖ ನಿಗಧಿಗೊಳಿಸಿರುವ ಅವಧಿಯಲ್ಲಿ ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಿದವರಿಗೆ ಪ್ರಥಮ ಆದ್ಯತೆ ನೀಡಲಾಗುವುದು. ಅವಧಿಯ ನಂತರ ಬರುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

## *E. ವ್ಯಾಸಂಗಕ್ಕೆ ಬೇಕಾದ ಪೂರಕ ಸಾಮಗ್ರಿಗಳನ್ನು ಖರೀದಿಸುವ ವಿಧಾನ:–*

- ವ್ಯಾಸಂಗಕ್ಕೆ ಬೇಕಾಗುವ ಸಾಮಗ್ರಿಗಳನ್ನು ಖರೀದಿಸಲು ಕರ್ನಾಟಕ ಪಾರದರ್ಶಕ ಕಾಯ್ದೆ ನಿಯಮಾವಳಿ ರೀತ್ಯಾ ಟೆಂಡರ್ ಆಹ್ವಾನಿಸುವದರ ಮೂಲಕ ಕನಿಷ್ಟ ದರಗಳಿಗೆ ಅನುಗುಣವಾಗಿ ಗುಣಮಟ್ಟದ ಸಾಮಗ್ರಿಗಳನ್ನು ಆಯ್ಕೆ ಮಾಡಿಕೊಳ್ಳಲಾಗುವುದು.

- ಟೆಂಡರ್‌ನಲ್ಲಿ ಹಾಜರುಪಡಿಸುವ ಮಾದರಿ ಸಾಮಗ್ರಿಗಳ ಗುಣಮಟ್ಟವನ್ನು ಪರಿಶೀಲಿಸಲು ಟೆಂಡರ್ ಪರಿಶೀಲನಾ ಸಮಿತಿಯನ್ನು ರಚಿಸಿ, ಗುಣಮಟ್ಟದ ಸಾಮಗ್ರಿಗಳನ್ನು ಆಯ್ಕೆ ಮಾಡಲಾಗುವುದು.

## *F. ಸಾಮಗ್ರಿಗಳ ಸರಬರಾಜುದಾರರನ್ನು ಆಯ್ಕೆ ಮಾಡುವ ಟೆಂಡರ್ ಸಮಿತಿ:–*

ಈ ಕೆಳಕಂಡ ಟೆಂಡರ್ ಸಮಿತಿಯಿಂದ ಸಂಸ್ಥೆಗಳ ಆಯ್ಕೆ ಪೂರ್ಣಗೊಳಿಸುವುದು.

1. ಜಂಟಿ ಆಯುಕ್ತರು (ಕಲ್ಯಾಣ) : ಅಧ್ಯಕ್ಷರು
2. ಉಪ ಆಯುಕ್ತರು (ಕಲ್ಯಾಣ) : ಉಪಾಧ್ಯಕ್ಷರು
3. ಮುಖ್ಯಲೆಕ್ಕಾಧಿಕಾರಿ : ಸದಸ್ಯರು
4. ಕಾನೂನು ಸಲಹೆಗಾರರು : ಸದಸ್ಯರು
5. ವಿದ್ಯಾಧಿಕಾರಿಗಳು : ಕಾರ್ಯದರ್ಶಿ

## *G. ಸಾಮಗ್ರಿಗಳನ್ನು ಖರೀದಿಸಿದ ನಂತರ ವಿತರಿಸುವ ವಿಧಾನ:–*

- ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಶಾಲಾ/ಕಾಲೇಜು ಮುಖ್ಯಸ್ಥರು ಶಾಲಾ/ಕಾಲೇಜು ದಾಖಲಾತಿ ಪುಸ್ತಕದಲ್ಲಿ ಇವರ ದಾಖಲೆಗಳನ್ನು ಪರಿಶೀಲಿಸಿ ಹೆಸರು, ಜಾತಿ ಮತ್ತು ವಿಳಾಸವನ್ನು ದಾಖಲಿಸಿಕೊಳ್ಳುವುದು.

- ಶಾಲಾ ದಾಖಲಾತಿಯು ಮುಕ್ತಾಯವಾದ ನಂತರ ಮುಖ್ಯಸ್ಥರು ದಾಖಲಾತಿ ಪುಸ್ತಕದಲ್ಲಿ ನಮೂದಿಸಿಕೊಂಡಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಅಂಕಿ ಅಂಶಗಳನ್ನು ವಿದ್ಯಾಧಿಕಾರಿ ರವರ ಕಛೇರಿಗೆ ಕಳುಹಿಸಿ ಕೊಡಬೇಕು.

- ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಶಾಲಾ/ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಖರೀದಿ ಮಾಡಿರುವ ಸಾಮಗ್ರಿಗಳನ್ನು ಆಯಾ ಶಾಲೆಗಳಿಗೆ ವಿತರಿಸಲಾಗುವುದು.

- ಶಾಲಾ ಮುಖ್ಯಸ್ಥರು ಸ್ವೀಕೃತವಾದ ಸಾಮಗ್ರಿಗಳನ್ನು ದಾಸ್ತಾನು ಪುಸ್ತಕದಲ್ಲಿ ದಾಖಲಿಸಿಕೊಂಡು ಮಕ್ಕಳಿಗೆ ವಿತರಿಸಿ ಸ್ವೀಕೃತಿ ಪುಸ್ತಕದಲ್ಲಿ ಸಹಿಯನ್ನು ಪಡೆಯುವುದು.

***ಸಹಿ/–***
***ವಿಶೇಷ ಆಯುಕ್ತರು(ಆಡಳಿತ)***
***ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ***